ಕರ್ನಾಟಕ ವಿಧಾನ ಪರಿಷತ್ತು
140ನೇ ಅಧಿವೇಶನ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 240 (277)
ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 04-03-2020
ಉತ್ತರಿಸುವ ಸಚಿವರು : ಮಾನ್ಯ ಉಪಮುಖ್ಯಮಂತ್ರಿಗಳು,
(ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ)

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆ ಮಡಿಕೇರಿ ತಾಲ್ಲೂಕು, ಮಕ್ಕಂದೂರು-ತಂತಿಪಾಲ-ಮಾಂದಲಪಟ್ಟಿ ರಸ್ತೆಯ ಆವಂಡಿ ಗ್ರಾಮದ ನಾಪಂಡ ಕಾಡು ಎಂಬಲ್ಲಿ ಮುಕ್ಕೋಡ್ಲ ಹೊಳೆಗೆ ಸೇತುವೆ ನಿರ್ಮಾಣವಾಗದೆ ಇರುವುದರಿಂದ ಆ ಭಾಗದಲ್ಲಿನ ಹಲವಾರು ಗ್ರಾಮಗಳಿಗೆ ಸರಿಯಾದ ಸಂಪರ್ಕ ವ್ಯವಸ್ಥೆ ಇಲ್ಲದೆ ವಿಶೇಷವಾಗಿ ಕಳೆದೆರಡು ವರ್ಷಗಳಲ್ಲಿ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ.
ಆ)	ಬಂದಿದ್ದಲ್ಲಿ, ಸುರಕ್ಷತೆ ಹಾಗೂ ಸಂಪರ್ಕದ ದೃಷ್ಟಿಯಿಂದ ಅತ್ಯಾವಶ್ಯಕವಾಗಿರುವ ಈ ಸೇತುವೆ ಇದುವರೆಗೂ ನಿರ್ಮಾಣವಾಗದಿರಲು ಕಾರಣಗಳೇನು.	ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ರಾಜ್ಯದ ವಿವಿದೆಡೆ 504 ಸೇತುವೆಗಳ ನಿರ್ಮಾಣ ಕಾಮಗಾರಿಯನ್ನು ರೂ. 1590 ಕೋಟಿಗಳ ಮೊತ್ತದಲ್ಲಿ ಕೈಗೊಳ್ಳುವ ಪ್ರಸ್ತಾವನೆಯಲ್ಲಿ ಸದರಿ ಸೇತುವೆ ನಿರ್ಮಾಣವು ರೂ.1.50 ಕೋಟಿಗೆ ಸೇರ್ಪಡೆ ಮಾಡಿ ನಿರ್ಮಾಣ ಮಾಡಲು ಉದ್ದೇಶಿಸಲಾಗಿತ್ತು. ಆದರೆ ಅನುದಾನದ ಕೊರತೆಯಿಂದಾಗಿ ಈ ಸೇತುವೆ ಕಾಮಗಾರಿ ಕೈಗೆತ್ತಿಕೊಳ್ಳಲು ಸಾಧ್ಯವಾಗಿಲ್ಲ.
ಇ)	ಪ್ರಸಕ್ತ ವರ್ಷದಲ್ಲಿ ಸೇತುವೆ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗುವುದೇ?	ಪ್ರಸಕ್ತ ಆರ್ಥಿಕ ವರ್ಷದಲ್ಲಿ ಲಭ್ಯವಾಗುವ ಅನುದಾನದಲ್ಲಿ ಈ ಕಾಮಗಾರಿಗೆ ಪ್ರಥಮ ಆದ್ಯತೆ ನೀಡಿ ಸೇತುವೆ ನಿರ್ಮಾಣ ಪ್ರಾರಂಭಿಸಲು ಕ್ರಮವಹಿಸಲಾಗುವುದು.

ಸಂಖ್ಯೆ:ಲೋಇ E-35 ಇಎಪಿ 2020

(ಗೋವಿಂದ ಎಂ. ಕಾರಜೋಳ)
ಮಾನ್ಯ ಉಪಮುಖ್ಯಮಂತ್ರಿಗಳು,
(ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಇಲಾಖೆ)